**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ರಾಜ್ಯದಲ್ಲಿರುವ ಸರ್ಕಾರಿ / ಖಾಸಗಿ ನರ್ಸಿಂಗ್ ಶಾಲೆಗಳು / ಕಾಲೇಜುಗಳು, ಪ್ಯಾರಾ ಮೆಡಿಕಲ್ ಸಂಸ್ಥೆಗಳು ಹಾಗೂ ಅಲೈಡ್ ಹೆಲ್ತ್ ಸೈನ್ಸಸ್ ಸಂಸ್ಥೆಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ಅಭ್ಯರ್ಥಿಗಳನ್ನು ರಾಜ್ಯಮಟ್ಟದ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡುವ ಪ್ರಕ್ರಿಯೆಯನ್ನು ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯಕ್ಕೆ ವಹಿಸುವ ಬಗ್ಗೆ.

**ಓದಲಾಗಿದೆ:**

(1) ಸರ್ಕಾರದ ಆದೇಶ ಸಂಖ್ಯೆ: ಆಕುಕ 228 ಎಂಎಂಇ 2018, ದಿನಾಂಕ: 12.06.2018.
(2) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ:ಇಡಿ/ಕೆಇಎ/ಎ1/ನರ್ಸಿಂಗ್/2019, ದಿನಾಂಕ 27.06.2019.

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ 2018-19 ನೇ ಸಾಲಿನಿಂದ ರಾಜ್ಯದ ಸರ್ಕಾರಿ / ಖಾಸಗಿ ನರ್ಸಿಂಗ್ ಶಾಲೆಗಳು ಮತ್ತು ಪ್ಯಾರಾ ಮೆಡಿಕಲ್ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ರಾಜ್ಯಮಟ್ಟದ ಕೌನ್ಸಿಲಿಂಗ್ ಮೂಲಕ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಿ ಆದೇಶಿಸಿದೆ.

ಮೇಲೆ ಓದಲಾದ (2) ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ಪ್ರಸ್ತುತ ಸ್ನಾತಕೋತ್ತರ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ನೀಟ್ ಪರೀಕ್ಷೆಯಲ್ಲಿ ಅರ್ಹತೆ ಹೊಂದಿರುವ ವಿದ್ಯಾರ್ಥಿಗಳಿಗೆ ದಾಖಲಾತಿ ಪರಿಶೀಲನಾ ಕಾರ್ಯವು ನಡೆಯುತ್ತಿದ್ದು, ಯುಜಿ ಸಿಇಟಿ 2019 (ಇಂಜಿನಿಯರಿಂಗ್ ಮತ್ತು ಇತರೆ ಕೋರ್ಸುಗಳ) ಹಾಗೂ ಯುಜಿ ನೀಟ್ ಸೀಟು ಹಂಚಿಕೆಯ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದೆಂದು ತಿಳಿಸಿರುತ್ತಾರೆ. ಸದರಿ ಕಾರ್ಯವು ಸೆಪ್ಟೆಂಬರ್ 2019 ರ ಅಂತ್ಯದವರೆಗೆ ನಡೆಯುತ್ತದೆ. ಇದಲ್ಲದೆ ಸದರಿ ಕಾರ್ಯಗಳ ಜೊತೆಯಲ್ಲಿ ಡಿಸಿಇಟಿ 2019, ಪಿಜಿಸಿಇಟಿ 2019 ರ ಪ್ರವೇಶ ಪರೀಕ್ಷೆ ದಾಖಲಾತಿ ಪರಿಶೀಲನೆಯ ಸೀಟು ಹಂಚಿಕೆ ಪ್ರಕ್ರಿಯೆ ಕಾರ್ಯಗಳನ್ನು ಪ್ರಾರಂಭಿಸಲಾಗುವುದೆಂದು ತಿಳಿಸಿರುತ್ತಾರೆ. ಅಲ್ಲದೆ, ಪಿಯು ಉಪನ್ಯಾಸಕರ ನೇಮಕಾತಿ ಸಂಬಂಧ ದಾಖಲಾತಿ ಪರಿಶೀಲನೆ ಕಾರ್ಯವು ಸದ್ಯದಲ್ಲೇ ನಡೆಸಬೇಕಾಗಿರುತ್ತದೆಂದು ತಿಳಿಸಿ, ಈ ಎಲ್ಲಾ ಪ್ರಕ್ರಿಯೆಗಳು ಆಗಸ್ಟ್ ತಿಂಗಳವರೆಗೆ ನಡೆಯಲಿರುವುದರಿಂದ, ಸರ್ಕಾರಿ / ಖಾಸಗಿ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ಕಾಲೇಜುಗಳಲ್ಲಿನ ಆಯ್ಕೆ ಪ್ರಕ್ರಿಯೆಯನ್ನು ಆಗಸ್ಟ್ 31 ರೊಳಗೆ ನಡೆಸಲು ಕಷ್ಟಸಾಧ್ಯವಾಗುತ್ತದೆಂದು ತಿಳಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, 2019-20 ನೇ ಸಾಲಿನಿಂದ ರಾಜ್ಯದ ಸರ್ಕಾರಿ / ಖಾಸಗಿ ನರ್ಸಿಂಗ್ ಶಾಲೆಗಳು / ಕಾಲೇಜುಗಳು, ಅಲೈಡ್ ಹೆಲ್ತ್ ಸೈನ್ಸಸ್ ಸಂಸ್ಥೆಗಳು ಮತ್ತು ಪ್ಯಾರಾ ಮೆಡಿಕಲ್ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ರಾಜ್ಯಮಟ್ಟದ ಕೌನ್ಸಿಲಿಂಗ್ ಮೂಲಕ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲು ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯಕ್ಕೆ ವಹಿಸಲು ಸರ್ಕಾರವು ತೀರ್ಮಾನಿಸಿ, ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 84 ಎಂಎಂಇ 2019, ಬೆಂಗಳೂರು, ದಿನಾಂಕ: 31-08-2019**

2019-20 ನೇ ಸಾಲಿನಿಂದ ರಾಜ್ಯದ ಸರ್ಕಾರಿ / ಖಾಸಗಿ ನರ್ಸಿಂಗ್ ಶಾಲೆಗಳು / ಕಾಲೇಜುಗಳು, ಅಲೈಡ್ ಹೆಲ್ತ್ ಸೈನ್ಸಸ್ ಸಂಸ್ಥೆಗಳು ಮತ್ತು ಪ್ಯಾರಾ ಮೆಡಿಕಲ್ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ರಾಜ್ಯಮಟ್ಟದ ಕೌನ್ಸಿಲಿಂಗ್ ಮೂಲಕ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲು ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯಕ್ಕೆ ವಹಿಸಿ ಆದೇಶಿಸಿದೆ.